CPMG / KA / BG-GPO / 13 / 2003-05

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ಪತ್ರಿಕೆ**



| ÅÖgâ ¥**IV-A** | ಬೆಂಗಳೂರು, ಗುರುವಾರ, ಮಾರ್ಚ್ ೨೭, ೨೦೦೩ (ಚೈತ್ರ ೬, ಶಕ ವರ್ಷ ೧೯೨೪) | ನಂ. ೩೧೦ |
|---|---|---|



ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ ಸಂವ್ಯಶಾಇ 05 ಶಾಸನ 2003, ಬೆಂಗಳೂರು, ದಿನಾಂಕ 27 ನೇ ಮಾರ್ಚ್, 2003

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2003 ಕ್ಕೆ 2003 ರ ಮಾರ್ಚ್ 27 ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2003 ರ ಕರ್ನಾಟಕ ಅಧಿನಿಯಮ ಸಂಖ್ಯೆ 4 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

2003 ರ ಕರ್ನಾಟಕ ಅಧಿನಿಯಮ ಸಂಖ್ಯೆ 4

(2003 ರ ಮಾರ್ಚ್ ಇಪ್ಪತ್ತೇಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2003

(2003 ರ ಮಾರ್ಚ್ ಇಪ್ಪತ್ತೇಳನೇ ದಿನಾಂಕದಂದು ಕರ್ನಾಟಕ ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ನ್ನು (2000 ದ ಕರ್ನಾಟಕ ಅಧಿನಿಯಮ ಸಂಖ್ಯೆ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ.

ಭಾರತ ಗಣರಾಜ್ಯದ ಐವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ :-

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ .- (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2003 ಎಂದು ಕರೆಯತಕ್ಕದ್ದು.

(2) ಇದು ಕೂಡಲೇ ಜಾರಿಗೆ ಬರತಕ್ಕದ್ದು.

2. 4 ನೇ ಪ್ರಕರಣದ ತಿದ್ದುಪಡಿ .- ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ರ (2000 ದ ಕರ್ನಾಟಕ ಅಧಿನಿಯಮ ಸಂಖ್ಯೆ 29) 4 ನೇ ಪ್ರಕರಣದ (ಡಿ) ಖಂಡದಲ್ಲಿ "ಎರಡು ವರ್ಷಗಳಿಗೆ" ಎಂಬ ಪದಗಳಿಗೆ "ಮೂರು ವರ್ಷಗಳಿಗೆ" ಎಂಬ ಪದಗಳನ್ನು ಯಾವಾಗಲೂ ಪ್ರತಿಯೋಜಿಸಲಾಗಿದೆಯೆಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಮ.ರಾ. ಹೆಗಡೆ
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು.